1321
28-2-2022

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 'ಮಹಿಳೆಯರ ರಕ್ಷಣೆ ಮತ್ತು ಸಬಲೀಕರಣ ಅಭಿಯಾನ' ಪ್ರಾರಂಭಿಸುವ ಬಗ್ಗೆ.

**ಓದಲಾಗಿದೆ:** 2021-22ರ ಆಯವ್ಯಯ ಭಾಷಣ.

**ಪ್ರಸ್ತಾವನೆ:**

1. ಮೇಲೆ ಓದಲಾದ 2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 40ರಲ್ಲಿ "ನಮ್ಮ ಸರ್ಕಾರದ ಮಹಿಳಾ ಪರ ಚಿಂತನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ನೇರ ಮೇಲ್ವಿಚಾರಣೆಯಲ್ಲಿ 'ಮಹಿಳೆಯರ ರಕ್ಷಣೆ ಮತ್ತು ಸಬಲೀಕರಣ ಅಭಿಯಾನ' ವನ್ನು ಪ್ರಾರಂಭಿಸಲಾಗುವುದು. ಇದರಿಂದ ಮಹಿಳೆಯರ ಸುರಕ್ಷಣೆ ಹಾಗೂ ಸಬಲೀಕರಣಕ್ಕೆ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳನ್ನು ವಿವಿಧ ಇಲಾಖೆಗಳ ಮಧ್ಯೆ ಸಮನ್ವಯವನ್ನು ಸಾಧಿಸಿ, ಜಾರಿಗೊಳಿಸಲು ಅನುಕೂಲವಾಗುವುದು" ಎಂದು ಘೋಷಿಸಲಾಗಿದೆ.

2. ಈ ಹಿನ್ನಲೆಯಲ್ಲಿ ಮಾನ್ಯ ಮುಖ್ಯ ಮಂತ್ರಿಯವರ ನೇರ ಮೇಲ್ವಿಚಾರಣೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳೆಯರು ಮತ್ತು ಮಕ್ಕಳ ಅಭಿವೃದ್ಧಿ, ವಿಶಿಷ್ಟಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಹಾಗೂ ಪದನಿಮಿತ್ತ ಅಭಿಯಾನ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರ ನೇತೃತ್ವದಲ್ಲಿ 'ಮಹಿಳೆಯರ ರಕ್ಷಣೆ ಮತ್ತು ಸಬಲೀಕರಣ ಅಭಿಯಾನ' ವನ್ನು ಪ್ರಾರಂಭಿಸಲು ನಿರ್ಣಯಿಸಲಾಗಿದ್ದು, ಈ ಅಭಿಯಾನವು ಮಹಿಳೆಯರ ಸಬಲೀಕರಣ ವಿಷಯಗಳನ್ನು ಮೇಲ್ವಿಚಾರಣೆ ನಡೆಸುವುದು. ಈ ಅಭಿಯಾನದ ಅಡಿ ಮಹಿಳೆಯರು ಮತ್ತು ಮಕ್ಕಳ ಅಭಿವೃದ್ಧಿ, ವಿಶಿಷ್ಟಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗಳ ಮಹಿಳೆಯರ ಸಬಲೀಕರಣ ವಿಷಯಗಳನ್ನು ಮೇಲ್ವಿಚಾರಣೆ ನಡೆಸಲಾಗುವುದು.

3. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 177 ಸೇನಿಎ 2021**
**ಬೆಂಗಳೂರು, ದಿನಾಂಕ : 05.02.2022**

4. ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಮಾನ್ಯ ಮುಖ್ಯ ಮಂತ್ರಿಯವರ ನೇರ ಮೇಲ್ವಿಚಾರಣೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳೆಯರು ಮತ್ತು ಮಕ್ಕಳ ಅಭಿವೃದ್ಧಿ, ವಿಶಿಷ್ಟಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಹಾಗೂ ಪದನಿಮಿತ್ತ ಅಭಿಯಾನ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರ ನೇತೃತ್ವದಲ್ಲಿ 'ಮಹಿಳೆಯರ ರಕ್ಷಣೆ ಮತ್ತು ಸಬಲೀಕರಣ ಅಭಿಯಾನ' ವನ್ನು ಪ್ರಾರಂಭಿಸಿ ಆದೇಶಿಸಿದೆ.

..2..

5. ಅಭಿಯಾನದ ಉದ್ದೇಶ ಮತ್ತು ಗುರಿ ಹಾಗೂ ಅಭಿಯಾನವು ನಿರ್ವಹಿಸುವ ವಿಷಯಗಳನ್ನು ಪ್ರತ್ಯೇಕವಾಗಿ ಅನುಬಂಧಗಳಲ್ಲಿ ಒದಗಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ವೀರಭದ್ರ 5-2-2022
(ವೀರಭದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ರಾಜ್ಯ ಪತ್ರದಲ್ಲಿ ಪ್ರಕಟಿಸಿ ಇದರ 100 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-ಎ), ಕೊಠಡಿ ಸಂಖ್ಯೆ: 31, ವಿಧಾನ ಸೌಧ, ನೆಲಮಹಡಿ ಇಲ್ಲಿಗೆ ಕಳುಹಿಸುವಂತೆ ಕೋರಲಾಗಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು, (ಜಿ&ಎಸ್‌ಎಸ್‌ಎ), (ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು.
5. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು
6. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
7. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
8. ಮಾನ್ಯ ಸಚಿವರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ರವರ ಆಪ್ತ ಕಾರ್ಯದರ್ಶಿಯವರು.
9. *ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ನವದೆಹಲಿ.
10. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಪ್ರಾದೇಶಿಕ ಆಯುಕ್ತರು.
11. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್/ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
12. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
13. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
14. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು
(*ಮುಖ ಪತ್ರದೊಂದಿಗೆ)

## ಅನುಬಂಧ-1

### ಉದ್ದೇಶ ಮತ್ತು ಗುರಿ

1. ಬಾಲ್ಯ ವಿವಾಹದ ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಿ, ಬಾಲ್ಯ ವಿವಾಹಗಳನ್ನು ತಡೆಗಟ್ಟುವುದು.
2. ಹೆಣ್ಣು ಮಕ್ಕಳ ಬಗೆಗಿನ ಪಕ್ಷಪಾತ ಧೋರಣೆಯನ್ನು ತೆಗೆದುಹಾಕಿ, ರಾಜ್ಯದಲ್ಲಿನ ಪ್ರತಿಕೂಲ ಲಿಂಗಾನುಪಾತವನ್ನು ಸರಿಪಡಿಸುವುದು ಮತ್ತು ಸಾಮಾಜಿಕ ಅನಿಷ್ಟಗಳನ್ನು ನಿರ್ಮೂಲಗೊಳಿಸುವುದು.
3. ಮಹಿಳೆಯರ ನಿಂದನೆ ಮತ್ತು ಸಾಗಾಣಿಕೆಯನ್ನು ತಡೆಗಟ್ಟುವುದು. ಸರ್ಕಾರೇತರ ಸಂಸ್ಥೆಗಳ ಮೂಲಕ ಪುನರ್ವಸತಿ ವ್ಯವಸ್ಥೆಯನ್ನು ಒದಗಿಸುವುದು ಹಾಗೂ ಸಂಕಷ್ಟದಲ್ಲಿರುವ ಮಹಿಳೆಯರಿಗೆ ಸಾಂತ್ವನ ಕೇಂದ್ರಗಳ ಮೂಲಕ ಆಶ್ರಯ ನೀಡುವುದು.
4. ಮಹಿಳೆಯರಿಗೆ ಆರ್ಥಿಕ, ಸಾಮಾಜಿಕ ಮತ್ತು ರಾಜಕೀಯ ಅಧಿಕಾರವನ್ನು ಒದಗಿಸುವುದು.
5. ಹರೆಯದ ಹೆಣ್ಣುಮಕ್ಕಳಿಗೆ (11-18 ವರ್ಷಗಳ) ಪೌಷ್ಟಿಕ ಆಹಾರ, ಆರೋಗ್ಯ ರಕ್ಷಣೆ ಮತ್ತು ಜೀವನ ಕೌಶಲ್ಯಗಳ ಮೂಲಕ ಸಮರ್ಥಗೊಳಿಸುವುದು.
6. ಕುಟುಂಬ/ಸಾಮಾಜಿಕ ಬೆಂಬಲ ಮತ್ತು ಆದಾಯದ ಸ್ವತಂತ್ರ ಮೂಲಗಳನ್ನು ಹೊಂದಿರದ ದುರ್ಬಲ ಮಹಿಳೆಯರಿಗೆ ಪರಿಹಾರ ಮತ್ತು ಪುನರ್ವಸತಿ ಒದಗಿಸುವುದು.
7. ಜೆಂಡರ್ ಬಜೆಟ್ ಮೂಲಕ ಸರ್ಕಾರದ ನೀತಿ, ಕಾರ್ಯಕ್ರಮ ಮತ್ತು ಯೋಜನೆಗಳಲ್ಲಿ ಮಹಿಳೆಯರನ್ನು ಮುಖ್ಯವಾಹಿನಿಗೆ ತರುವುದು.
8. ಕರ್ನಾಟಕ ರಾಜ್ಯ ಸಮಾಜ ಕಲ್ಯಾಣ ಮಂಡಳಿ ಮತ್ತು ಅದರೊಂದಿಗಿನ ಸ್ವಯಂಪ್ರೇರಿತ ಸಂಘಟನೆಗಳ ಮೂಲಕ ಮಹಿಳೆಯರಿಗೆ ವಿವಿಧ ಬೆಂಬಲ ಸೇವೆಗಳನ್ನು ಒದಗಿಸುವುದು.
9. ಮಹಿಳಾ ಅಭಿವೃದ್ಧಿ ನಿಗಮದ ಮೂಲಕ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಕಾರ್ಯಕ್ರಮಗಳನ್ನು ಜಾರಿಗೊಳಿಸುವುದು.
10. ರಾಜ್ಯ ಮಹಿಳಾ ಆಯೋಗದ ಮೂಲಕ ಸಾಮಾಜಿಕ ನ್ಯಾಯ ವ್ಯವಸ್ಥೆಯಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಖಚಿತಪಡಿಸಿಕೊಳ್ಳುವುದು.
11. ಶಾಸನಗಳು, ನೀತಿಗಳು, ಕಾರ್ಯಕ್ರಮಗಳು ಮತ್ತು ಯೋಜನೆಗಳನ್ನು ರೂಪಿಸಿ ಜಾರಿಗೊಳಿಸುವುದರ ಮೂಲಕ ಮಹಿಳೆಯರನ್ನು ಸಾಮಾಜಿಕ ಮತ್ತು ಆರ್ಥಿಕವಾಗಿ ಸಬಲೀಕರಣಗೊಳಿಸುವುದು.
12. ಜೆಂಡರ್ ಬಜೆಟ್ ಪ್ರಕ್ರಿಯೆಯನ್ನು ಕಾರ್ಯಗತಗೊಳಿಸಲು ರಾಜ್ಯ ಸರ್ಕಾರದ ಇಲಾಖೆಗಳನ್ನು, ಅಧಿಕಾರಿ/ನೌಕರರನ್ನು ತರಬೇತುಗೊಳಿಸುವುದು ಹಾಗೂ ಮಹಿಳೆಯರ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸುವುದು.
13. ಮಹಿಳಾ ಸುರಕ್ಷತೆ ಬಗ್ಗೆ ಒಳಾಡಳಿತ ಇಲಾಖೆಯೊಂದಿಗೆ ಸಮನ್ವಯ ಸಾಧಿಸುವುದು.

## ಅನುಬಂಧ-2

## ಮೇಲ್ವಿಚಾರಣೆಯ ವಿಷಯಗಳು

1. ಮಹಿಳೆಯರು ಮತ್ತು ಮಕ್ಕಳ ಅಭಿವೃದ್ಧಿ, ವಿಶಿಷ್ಟಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ:

(1) Stree Shakti
(2) Women Development Corporation
(3) State Women's Commission
(4) Protection
(5) State Homes for Women, Reception Centres
(6) Swadhar & Ujjwala Schemes
(7) Protection of Women from Domestic Violence Act
(8) Prevention of Immoral Trafficking Act
(9) Karnataka Marriage Act
(10) Dowry Prohibition Act
(11) Beti Bachao Beti Padhao
(12) Child Marriage Prohibiion Act
(13) Prevention of Sexual Harassment at Workplace Act
(14) Indecent Representation of Women Act
(15) Gender Budget monitoring
(16) One Stop Centres
(17) Gelati Centres
(18) Santwana Counselling Centre
(19) Women's Empowerment Policy
(20) State Girl Child Policy
(21) State Transgender Policy
(22) Family counselling centre
(23) Centre of Excellence
(24) And all other Women related issues.

2. ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ:

(1) NRLM
(2) NULM